# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಎಲ್ಲಿ ಯಾರ ಹೆಸರಿನ ಅನ್ನವಿರುತ್ತದೋ
ಸಮಯ ಅವರನ್ನು ಅಲ್ಲಿಗೆ ಕರೆದೊಯ್ಯುತ್ತದೆ..
ಯಾರೂ ಕೂಡ ಇನ್ನೊಬ್ಬರು ಕೊಟ್ಟದ್ದನ್ನು ತಿನ್ನುವುದಿಲ್ಲ
ತನ್ನ ಅದೃಷ್ಟದಲ್ಲಿ ಇದ್ದುದನ್ನೇ ತಿನ್ನುತ್ತಾರೆ..
ಜಗದಿಂದ ಯಾರು ಉನ್ನತ ಸ್ಥಾನ ಪಡೆಯುವುದಿಲ್ಲ
ಅದೃಷ್ಟದ ಬಾಗಿಲು ತೆರೆದಾಗ ತಾನಾಗಿಯೇ ಒಲಿಯುತ್ತದೆ..
ಇನ್ನೊಬ್ಬರ ಸಹಕಾರದಿಂದ ಸಿಂಹಾಸನ ಏರಲಾಗುವುದಿಲ್ಲ
ಭಗವಂತನ ಅನುಗ್ರಹ ಆದಾಗ ಅವಕಾಶ ಒದಗುತ್ತದೆ..
ಎಲ್ಲವೂ ಭೂಮಿಗೆ ಬರುವಾಗಲೇ ನಿಗದಿಯಾಗಿರುತ್ತದೆ
ಆದರೆ ಎಲ್ಲರು ಮಾನವರಾಗಿ ಕಾರ್ಯನಿರ್ವಹಿಸಬೇಕಾಗುತ್ತದೆ..

**ಭಗವಾನ್ ಶ್ರೀಕೃಷ್ಣ**




REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 29-11-2024 to 05-12-2024 ಬೆಲೆ: 7-00 ಸಂಪುಟ–4 ಸಂಚಿಕೆ–23 ಪುಟಗಳು–6



ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು




ಸರಕಾರಿ ಅಧಿಕಾರಿಗಳು ಸರಿಯಾಗಿ ಕೆಲಸ ಮಾಡುವುದಿಲ್ಲ ಎನ್ನುವ ಆರೋಪ ಇಂದು ನಿನ್ನೆಯದಲ್ಲ. ಸಾಮಾನ್ಯ ಜನರಿಂದ ಹಿಡಿದು ಜನ ಪ್ರತಿನಿಧಿಗಳವರೆಗೂ ಇಂತಹ ಆರೋಪ ಸರ್ವೇಸಾಮಾನ್ಯವಾಗಿದೆ. ಇನ್ನು ಮಹಾನಗರ ಪಾಲಿಕೆಯಲ್ಲಿ ಸಾಮಾನ್ಯ ಸಭೆಯಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿರುತ್ತಾರೆ. ಆದರೆ ಮಂಗಳೂರು ಮಹಾನಗರ ಪಾಲಿಕೆಯ ಸಾಮಾನ್ಯ ಸಭೆಯಲ್ಲಿ ಒಂದು ಕಡೆ ಆಡಳಿತ ಪಕ್ಷ ಮತ್ತು ಪ್ರತಿ ಪಕ್ಷಗಳು ಕಿತ್ತಾಡಿಕೊಳ್ಳುತ್ತಿದ್ದರೆ ಅಧಿಕಾರಿಗಳು ನಿದ್ದೆಗೆ ಜಾರುವ ದೃಶ್ಯ ಕಾಣಸಿಗುತ್ತದೆ. ಅಧಿಕಾರಿಗಳನ್ನು ಸಭೆಗೆ ಕರೆದು, ಅವರ ಕೆಲಸದ ಬಗ್ಗೆ ಪ್ರಶ್ನಿಸದೇ ಆಡಳಿತ ಪಕ್ಷ ಮತ್ತು ವಿರೋಧ ಪಕ್ಷಗಳು ಬಡಿದಾಡಿಕೊಳ್ಳುವುದಾದರೆ ಅಧಿಕಾರಿಗಳನ್ನು ಕರೆಯುವುದಾದರೂ ಯಾಕೆ?

## ತುಳುವನ್ನು ಅಧಿಕೃತ ಭಾಷೆಯನ್ನಾಗಿಸಲು ತೊಡಕಿಲ್ಲ..



**ಮಂಗಳೂರು:** ತುಳುವನ್ನು ಎರಡನೇ ಅಧಿಕೃತ ಭಾಷೆಯನ್ನಾಗಿಸಲು ಯಾವುದೇ ತೊಡಕಿಲ್ಲ. ಬೇರೆಯವರೂ ಕೇಳುತ್ತಾರೆ ಎನ್ನುವ ತರ್ಕ ಸರಿಯಲ್ಲ. ಆದರೆ ಈ ಬಗ್ಗೆ ಸಮರ್ಥಿಸುವ ಹಾಗೂ ಶಾಸನ ಸಭೆಯಲ್ಲಿ ಪ್ರಬಲವಾಗಿ ವಿಷಯ ಮಂಡಿಸುವ ಜನಪ್ರತಿನಿಧಿಗಳು ಬೇಕು ಎಂದು ವಿಶ್ರಾಂತ ಕುಲಪತಿ, ಕರ್ನಾಟಕ ಜಾನಪದ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಡಾ. ಕೆ. ಚಿನ್ನಪ್ಪ ಗೌಡ ಹೇಳಿದರು. ಪ್ರೆಸ್‌ಕ್ಲಬ್ ವತಿಯಿಂದ ಆಯೋಜಿಸಿದ್ದ ಪ್ರೆಸ್ ಕ್ಲಬ್ ಗೌರವ ಅತಿಥಿ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿ, **3ನೇ ಪುಟಕ್ಕೆ**





## ದಬ್ಬಾಳಿಕೆ ನಡೆಸಿದರೆ ಹೋರಾಟಕ್ಕೆ ಸಿದ್ಧ –ಕಿಶೋರ್ ಕುಮಾರ್

**ಮಂಗಳೂರು:** ರಾಜ್ಯ ಸರಕಾರವು ಪೊಲೀಸ್ ಇಲಾಖೆಯನ್ನು ದುರ್ಬಳಕೆ ಮಾಡಿಕೊಂಡು ಹಿಂದೂ ಕಾರ್ಯಕರ್ತರ ಮೇಲೆ ದಬ್ಬಾಳಿಕೆ ನಡೆಸಿದರೆ ಯಾವುದೇ ರೀತಿಯ ಹೋರಾಟಕ್ಕೂ ಸಿದ್ಧ ಎಂದು ವಿಧಾನ ಪರಿಷತ್ ಸದಸ್ಯರಾದ ಕಿಶೋರ್ ಕುಮಾರ್ ಪುತ್ತೂರು ಹೇಳಿದ್ದಾರೆ. ಉಡುಪಿಯಲ್ಲಿ ಹಿಂದೂ ಜಾಗರಣಾ ವೇದಿಕೆಯ ನಾಯಕರ ಮೇಲೆ ಸುಮೊಟೋ ಕೇಸ್ ದಾಖಲಿಸಿರುವ ಕುರಿತು ಮಾತನಾಡಿ, ರಾಜ್ಯದಲ್ಲಿ ಆಡಳಿತ ಸರಕಾರವು ಆಡಳಿತಕ್ಕೆ ಬಂದಾಗಿನಿಂದ ನಿರಂತರವಾಗಿ ಹಿಂದೂ ಸಂಘಟನೆಗಳ ಕಾರ್ಯಕರ್ತರನ್ನು ಗುರಿಯಾಗಿರಿಸಿ ಕೇಸು ದಾಖಲಿಸುವುದು, ಗಡಿಪಾರು, ಗೂಂಡಾ ಕಾಯ್ದೆ ಹೇರುವ ಮೂಲಕ ಮಾನಸಿಕ ಕಿರುಕುಳ ನೀಡಲಾಗುತ್ತಿದೆ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ತುಘಲಕ್ ಮಾದರಿಯ ಆಡಳಿತ ಜಾರಿಗೊಳಿಸಿದ್ದು ಸಂವಿಧಾನ ಜನತೆಗೆ ನೀಡಿರುವ ಹಕ್ಕುಗಳನ್ನು ಕಸಿಯಲಾಗುತ್ತಿದೆ. ಕಾನೂನು ಸುವ್ಯವಸ್ಥೆ ಕಾಪಾಡಬೇಕಾದ ಪೊಲೀಸ್ **3ನೇ ಪುಟಕ್ಕೆ**



## ಸಮ್ಮಿಶ್ರ ಸರ್ಕಾರದಲ್ಲಿ ಸ್ಪೀಕರ್‌ಗೆ ಬೇಡಿಕೆ ಜಾಸ್ತಿ –ಯು ಟಿ ಖಾದರ್

**ಮಂಗಳೂರು:** ಸಮ್ಮಿಶ್ರ ಸರ್ಕಾರ ಇದ್ದಾಗ ಮಾತ್ರ ಸ್ಪೀಕರ್ ಹುದ್ದೆಗೆ ಬೇಡಿಕೆ ಜಾಸ್ತಿ ಇರುತ್ತದೆ. ಈ ಹುದ್ದೆಗೆ ಸದಾಕಾಲ ಬೇಡಿಕೆ ಇರಬೇಕಾದರೆ ಇನ್ನಷ್ಟು ಸೌಲಭ್ಯ ನೀಡಬೇಕು. ಸ್ಪೀಕರ್ ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ನೀಡಬೇಕು ಎಂದು ವಿಧಾನ ಸಭಾಧ್ಯಕ್ಷ ಯು.ಟಿ. ಖಾದರ್ ಹೇಳಿದರು. ಅವರು ಇಟಲಿಯ ವ್ಯಾಟಿಕನ್ ಸಿಟಿಯಲ್ಲಿ ನಡೆಯುತ್ತಿರುವ ಅಂತರರಾಷ್ಟ್ರೀಯ ಶಾಂತಿ ಸಮ್ಮೇಳನಕ್ಕೆ ತೆರಳುವ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿ, ಸಮ್ಮಿಶ್ರ ಸರ್ಕಾರ ಇದ್ದಾಗ ಮಾತ್ರ ಸ್ಪೀಕರ್ ಹುದ್ದೆಗೆ ಬೇಡಿಕೆ ಜಾಸ್ತಿ **3ನೇ ಪುಟಕ್ಕೆ**









## ತುಳುವನ್ನು ಅಧಿಕೃತ ಭಾಷೆಯನ್ನಾಗಿಸಲು ತೊಡಕಿಲ್ಲ

ಒಂದನೇ ಪುಟದಿಂದ......

ಫಿನ್‌ಲ್ಯಾಂಡ್ ದೇಶದ ಜನಸಂಖ್ಯೆ ಸುಮಾರು 50 ಲಕ್ಷ. ಅದನ್ನು ಪ್ರತ್ಯೇಕ ದೇಶ ಮಾಡಬೇಕಾದರೆ ನಿಮಗೆ ಯಾಕೆ ಬೇಕು ದೇಶ, ನಿಮಗೆ ನಿಮ್ಮದೇ ಆದ ಕಾವ್ಯ ಇಲ್ಲ ಎಂದೆಲ್ಲಾ ಪ್ರಶ್ನಿಸಿದ್ದರಂತೆ. ಆಗ ಅಲ್ಲಿ ಅಳಿದುಳಿದ ಕಾವ್ಯಗಳನ್ನು ಒಗ್ಗೂಡಿಸಿ ಇದೆ ನಮ್ಮ ಮಹಾ ಕಾವ್ಯ ಎಂದಿದ್ದರಂತೆ. ಆದರೆ ಕಾಸರಗೋಡು, ದ.ಕ, ಉಡುಪಿ ಸೇರಿ ತುಳು ಮಾತನಾಡುವವರು 50 ಲಕ್ಷಕ್ಕೂ ಅಧಿಕ ಸಂಖ್ಯೆಯಲ್ಲಿದ್ದಾರೆ. ತುಳುವಿಗೆ ಸಂಖ್ಯೆ, ಸಾಹಿತ್ಯ, ಸಾಂಸ್ಕೃತಿಕ ಬೆಂಬಲ ಇದೆ. ತುಳುವನ್ನು ಎರಡನೇ ಅಧಿಕೃತ ಭಾಷೆಯನ್ನಾಗಿಸಲು ಯಾವುದೇ ತೊಡಕಿಲ್ಲ. ಬೇರೆಯವರೂ ಕೇಳುತ್ತಾರೆ ಎನ್ನುವ ತರ್ಕ ಸರಿಯಲ್ಲ. ಆದರೆ ಈ ಬಗ್ಗೆ ಸಮರ್ಥಿಸುವ ಹಾಗೂ ಶಾಸನ ಸಭೆಯಲ್ಲಿ ಪ್ರಬಲವಾಗಿ ವಿಷಯ ಮಂಡಿಸುವ ಜನಪ್ರತಿನಿಧಿಗಳು ಬೇಕು ಎಂದರು. ಇನ್ನು ಕನ್ನಡ ಭಾಷೆಯನ್ನು ಸಂರಕ್ಷಿಸುವ ನಿಟ್ಟಿನಲ್ಲಿ ಕನ್ನಡ ಶಾಲೆಗಳನ್ನು ಉಳಿಸುವುದು ಅತೀ ಅಗತ್ಯ. ರಾಜ್ಯದಲ್ಲಿ ಕನಿಷ್ಠ ಹಿರಿಯ ಪ್ರಾಥಮಿಕ ಹಂತದವರೆಗೆ ಕನ್ನಡ ಕಲಿಕೆಗೆ ಆದ್ಯತೆ ನೀಡಬೇಕು. ಈ ನಿಟ್ಟಿನಲ್ಲಿ ಕನ್ನಡ ಮಾಧ್ಯಮ ಶಾಲೆಗಳನ್ನು ಇತರಯಾವುದೇ ಭಾಷೆಗಳಿಗೆ ಕಡಿಮೆ ಇಲ್ಲದೆ ಸಶಕ್ತಗೊಳಿಸುವ ಕಾರ್ಯವಾಗಬೇಕು ಎಂದರು.

## ದಬ್ಬಾಳಿಕೆ ನಡೆಸಿದರೆ ಹೋರಾಟಕ್ಕೆ ಸಿದ್ಧ – ಕಿಶೋರ್ ಕುಮಾರ್

ಒಂದನೇ ಪುಟದಿಂದ......

ಇಲಾಖೆಯನ್ನು ಬಳಸಿ ಸಂಘ ಪರಿವಾರದ ಕಾರ್ಯಕರ್ತರನ್ನು ಟಾರ್ಗೆಟ್ ಮಾಡಲಾಗುತ್ತಿದೆ. ನಮ್ಮನ್ನು ನೇರವಾಗಿ ಎದುರಿಸಲಾಗದ ಕಾಂಗ್ರೆಸ್ ವಾಮಮಾರ್ಗದ ಮೂಲಕ ಹತ್ತಿಕ್ಕುವ ಪ್ರಯತ್ನ ಮಾಡುತ್ತಿದೆ. ಹಿಂದೂ ಜಾಗರಣಾ ವೇದಿಕೆಯ ಮುಖಂಡರಾದ ಶ್ರೀಕಾಂತ್ ಶೆಟ್ಟಿಅವರ ಮೇಲೆ ಜಾಮೀನು ರಹಿತ ಕೇಸು ದಾಖಲಿಸಲಾಗಿದೆ. ಪದೇ ಪದೇ ಹಿಂದೂ ಕಾರ್ಯಕರ್ತರನ್ನು ಗುರಿಯಾಗಿಸಿ ಕೇಸು ದಾಖಲಿಸುವ ಪ್ರಯತ್ನ ಮಾಡಲಾಗುತ್ತಿದೆ. ಇದು ಹೀಗೆಯೇ ಮುಂದುವರಿದರೆ ಪೊಲೀಸ್‌ಠಾಣೆಯಲ್ಲಿ ಧರಣಿ ನಡೆಸಲಾಗುವುದು. ಕಾರ್ಯಕರ್ತರಿಗಾಗಿ ಯಾವುದೇ ರೀತಿಯ ಹೋರಾಟಕ್ಕೂ ಸಿದ್ಧ ಎಂದರು.

## ಸಮ್ಮಿಶ್ರ ಸರ್ಕಾರದಲ್ಲಿ ಸ್ಪೀಕರ್‌ಗೆ ಬೇಡಿಕೆ ಜಾಸ್ತಿ–ಯು.ಟಿ ಖಾದರ್

ಒಂದನೇ ಪುಟದಿಂದ......

ಇರುತ್ತದೆ. ಈ ಹುದ್ದೆಗೆ ಸದಾಕಾಲ ಬೇಡಿಕೆ ಇರಬೇಕಾದರೆ ಇನ್ನಷ್ಟು ಸೌಲಭ್ಯ ನೀಡಬೇಕು. ಎಲ್ಲರ ಬಳಿ ಹೋಗಿ ಕುಳಿತುಕೊಂಡು ಹಠ ಹಿಡಿದು ಅನುದಾನತರಲು ಸ್ಪೀಕರ್ ಆಗಿದ್ದವರಿಗೆ ಸಾಧ್ಯವಾಗುವುದಿಲ್ಲ. ಈಗ ನನ್ನ ಮಾತಿಗೆ ಮುಖ್ಯಮಂತ್ರಿ, ಎಲ್ಲ ಸಚಿವರು ಗೌರವ ನೀಡಿ ನನ್ನ ಕ್ಷೇತ್ರದ ಕೆಲಸ ಮಾಡಿಕೊಡುತ್ತಿದ್ದಾರೆ. ಬೇರೆಯವರು ಇದ್ದರೆ ಹೀಗೆ ಆಗುತ್ತದೆಯೇ ಗೊತ್ತಿಲ್ಲ ಎಂದರು. ಮೋದಿ ನಂತರಅತಿ ಹೆಚ್ಚು ವಿದೇಶ ಪ್ರವಾಸ ಮಾಡಿದವರು ನೀವೇ ಇರಬೇಕು ಎನ್ನುವ ಪ್ರಶ್ನೆಗೆ ಉತ್ತರಿಸಿ ವಿದೇಶ ಪ್ರವಾಸದಲ್ಲಿ ಇನ್ನೊಬ್ಬರ ನಂತರದ ಸ್ಥಾನ ಅಲ್ಲ, ಅವರಿಗಿಂತ ಜಾಸ್ತಿ ವಿದೇಶ ಪ್ರವಾಸ ಮಾಡಬೇಕು ಎಂಬುದು ನನ್ನ ಆಸೆ' ವರ್ಷದಲ್ಲಿ ಐದಾರು ಅಂತರರಾಷ್ಟ್ರೀಯ ಸಮ್ಮೇಳನಗಳು ಇರುತ್ತವೆ. ಇದಕ್ಕೆ ಸರ್ಕಾರಿ ವೆಚ್ಚದಲ್ಲಿ ಹೋಗುತ್ತೇವೆ. ಅದರ ಹೊರತಾಗಿಯೂ ಬೇರೆ ಬೇರೆ ರಾಷ್ಟಗಳಿಂದಲೂ ಆಹ್ವಾನ ಬರುತ್ತವೆ. 'ಎಂದರು.

## ಎಂಎಸ್‌ಎಂಇ ಉದ್ದಿಮೆದಾರರಿಂದ ಅರ್ಜಿ ಆಹ್ವಾನ

ಮಂಗಳೂರು – ಕರ್ನಾಟಕ ತಾಂತ್ರಿಕ ಸಲಹಾ ಸೇವಾ ಸಂಸ್ಥೆ (ಟೆಕ್ಸಾಕ್) ಮೂಲಕ ಕೇಂದ್ರ ಮತ್ತು ರಾಜ್ಯ ಪುರಸ್ಕೃತ RAMP ಯೋಜನೆಯಡಿ TReDS & ESM ಕಾರ್ಯಗಾರವನ್ನು ಡಿಸೆಂಬರ್ 2024ರ ಅಂತ್ಯಕ್ಕೆ ಪ್ರಯೋಜಿಸಲು ಉದ್ದೇಶಿಸಲಾಗಿದೆ. ಈ ಕಾರ್ಯಗಾರದಲ್ಲಿ ಭಾಗವಹಿಸಲು 100ರಿಂದ 150 ಎಂ.ಎಸ್.ಎಂ.ಇ ನೋಂದಾಯಿತ ಉದ್ದಿಮೆದಾರರನ್ನು ಆಯ್ಕೆ ಮಾಡಲಾಗುವುದು. ಹೆಚ್ಚಿನ ಮಾಹಿತಿಗೆ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ದೂರವಾಣಿ ಸಂಖ್ಯೆ: 0824-2214021 ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರೂಪ್ ಡಿ ಹುದ್ದೆಗೆ ಅರ್ಜಿ ಆಹ್ವಾನ

ಮಂಗಳೂರು – ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಮಿಷನ್ ಶಕ್ತಿ ಯೋಜನೆಯ ಸಂಬಾಲ್ ಉಪಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಸಖಿ ಒನ್ ಸ್ಟಾಪ್ ಸೆಂಟರ್‌ಗೆ ಹೊರಗುತ್ತಿಗೆ ಆಧಾರದ ಮೇರೆಗೆ ಗ್ರೂಪ್ ಡಿ (ಸ್ವಚ್ಛತಾ/ ಭದ್ರತಾ ಸಿಬ್ಬಂದಿ)-1 ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ / ಸೂಕ್ತ ದಾಖಲೆಗಳೊಂದಿಗೆ, ಉಪನಿರ್ದೇಶಕರ ಕಛೇರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, 2ನೇ ಮಹಡಿ , ಸ್ತ್ರೀ ಶಕ್ತಿ ಭವನ, ಮೆಸ್ಕಾಂ ಬಳಿ, ಬಿಜೈ ಮಂಗಳೂರು ಇಲ್ಲಿಗೆ ಅರ್ಜಿ ಸಲ್ಲಿಸಬೇಕು ಎಂದು ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಾನುವಾರುಗಳಿಗೆ ಲಸಿಕೆ ಅಭಿಯಾನ

ಮಂಗಳೂರು – ಈ ಸಾಲಿನಲ್ಲಿ ಹಿಂಗಾರು ಮಳೆ ಹೆಚ್ಚಾಗಿದ್ದು ಹಾಗೂ ಈಗಾಗಲೇ ಚಳಿಗಾಲ ಆರಂಭವಾಗುತ್ತಿರುವುದರಿಂದ ನೊಣ, ಸೊಳ್ಳೆಗಳು ಜಾಸ್ತಿಯಾಗಿ ರೋಗ ಉಲ್ಬಣವಾಗುವ ಸಾಧ್ಯತೆ ಇದೆ. ಈಗಾಗಲೇ ರಾಜ್ಯದ ಕೆಲವು ಭಾಗಗಳಲ್ಲಿ ಚರ್ಮಗಂಟು ರೋಗೋದ್ರೇಕ ಕಂಡುಬಂದಿರುವ ಹಿನ್ನಲೆಯಲ್ಲಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯು ಮುನ್ನೆಚ್ಚರಿಕಾ ಕ್ರಮವಾಗಿ ದ.ಕ ಜಿಲ್ಲೆಯಲ್ಲಿ ಜಾನುವಾರುಗಳಿಗೆ ಚರ್ಮ ಗಂಟು ರೋಗದ ವಿರುದ್ಧ ಉಚಿತ ಲಸಿಕೆ ಅಭಿಯಾನವನ್ನು ಜಿಲ್ಲೆಯಾದ್ಯಂತ ನವೆಂಬರ್ 25ರಿಂದ ಡಿಸೆಂಬರ್ 5ರವರೆಗೆ ಹಮ್ಮಿಕೊಳ್ಳಲಾಗಿದೆ.

## ನವೆಂಬರ್ 30ರವರೆಗೆ ಅವಧಿ ವಿಸ್ತರಣೆ

ಶಿವಮೊಗ್ಗ : ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು 2024-25ನೇ ಸಾಲಿಗೆ ಮೆಟ್ರಿಕ್ ನಂತರದ ಕೋರ್ಸುಗಳಾದ ಪಿಯುಸಿ ಸಮನಾಂತರ ಸಾಮಾನ್ಯ ಪದವಿ ಮತ್ತು ಸಂಯೋಜಿತ ಉಭಯ ಪದವಿ ಕೋರ್ಸುಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ಹಾಗೂ ಪ್ರವರ್ಗ-1ರ ಅಲೆಮಾರಿ/ ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ ಮತ್ತು ವಿದ್ಯಾರ್ಥಿ ಸೌಲಭ್ಯಕ್ಕಾಗಿ https://ssp.postmartic.karnataka.gov.inವೆಬ್‌ಸೈಟ್ ಮೂಲಕ ಅರ್ಜಿ ಆಹ್ವಾನಿಸಲಾಗಿತ್ತು, ಅರ್ಜಿ ಸಲ್ಲಿಸುವ ದಿನಾಂಕವನ್ನು ನವೆಂಬರ್ 30ರವರೆಗೆ ವಿಸ್ತರಿಸಲಾಗಿದೆ ಎಂದು ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಯುವನಿಧಿ ಯೋಜನೆಗೆ ಆನ್‌ಲೈನ್ ಅರ್ಜಿ ಆಹ್ವಾನ

ಶಿವಮೊಗ್ಗ : ಕರ್ನಾಟಕ ಸರ್ಕಾರದ ಯುವ ನಿಧಿ ಯೋಜನೆಗೆ ನೋಂದಣಿ ಚಾಲ್ತಿಯಲ್ಲಿದ್ದು, ಅರ್ಹರು ಸೇವಾ ಸಿಂಧು ಪೋರ್ಟಲ್ ಅಥವಾ ಹತ್ತಿರದ ಗ್ರಾಮ ಒನ್, ಶಿವಮೊಗ್ಗ ಒನ್ ಕೇಂದ್ರಗಳ ಮೂಲಕ ಆನ್‌ಲೈನ್ ನೋಂದಣಿ ಆಹ್ವಾನಿಸಿದೆ. 2022-23ರಲ್ಲಿ ಪದವಿ/ ಡಿಪ್ಲೊಮಾ ಉತ್ತೀರ್ಣರಾದವರು, ಪದವಿ/ ಡಿಪ್ಲೊಮಾ ನಂತರ ಕನಿಷ್ಠ 6 ತಿಂಗಳ ಅವಧಿಯವರೆಗೆ ಸರ್ಕಾರಿ/ಖಾಸಗಿ ಉದ್ಯೋಗ ಹೊಂದಿಲ್ಲದವರು, ಸ್ವಯಂ ಉದ್ಯೋಗ ಹೊಂದಿಲ್ಲದವರು, ಉನ್ನತ ವ್ಯಾಸಂಗ ಮುಂದುವರಿಸದೇ ಇರುವವರು, ಕರ್ನಾಟಕದಲ್ಲಿ ವಾಸವಿರುವವರು ಯುವನಿಧಿ ಯೋಜನೆಗೆ ನೊಂದಣಿ ಮಾಡಿಕೊಳ್ಳಲು ಅರ್ಹರಾಗಿರುತ್ತಾರೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಸಾಗರ ರಸ್ತೆ, 2ನೇ ತಿರುವು, ಗುತ್ಯಪ್ಪ ಕಾಲೋನಿ ಶಿವಮೊಗ್ಗ. ದೂ.ಸಂ.:08182-255293 ಅಥವಾ ಸಹಾಯವಾಣಿ 18005999918 ನ್ನು ಸಂಪರ್ಕಿಸುವುದು.

## ಕಾರಾಗೃಹ ವಾರ್ಡನ್ ಹುದ್ದೆಗೆ ಆಹ್ವಾನ

ಮಡಿಕೇರಿ – ಕರ್ನಾಟಕ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಕಾರಾಗೃಹ ವಾರ್ಡನ್ ಹುದ್ದೆಗೆ ತಾತ್ಕಾಲಿಕವಾಗಿ ಒಂದು ವರ್ಷದ ಅವಧಿಗೆ ಗುತ್ತಿಗೆ ಆಧಾರದ ಮೇಲೆ ಮಾಜಿ ಸೈನಿಕರನ್ನು ನೇಮಕಾತಿ ಮಾಡಿಕೊಳ್ಳಲಾಗುತ್ತಿದ್ದು, ಈ ಹುದ್ದೆಗೆ ಮಾಸಿಕ ವೇತನ ರೂ. 28,499 ಹಾಗೂ ಕರ್ತವ್ಯ ಸಮಯ 8 ಗಂಟೆ/ 3 ಶಿಫ್ಟ್ ಗಳಾಗಿರುತ್ತದೆ. ಆಸಕ್ತಿಯುಳ್ಳ ಮಾಜಿ ಸೈನಿಕರು ಡಿಸೆಂಬರ್, 04ರೊಳಗೆ ಕಚೇರಿಯ ಸಮಯದಲ್ಲಿ ಬಂದು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಹಕಾರ ತರಬೇತಿ (ಡಿಸಿಎಂ)ಗೆ ಅರ್ಜಿ ಆಹ್ವಾನ

ಮಡಿಕೇರಿ : ಡಿಪ್ಲೊಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್(ಡಿಸಿಎಂ ತರಬೇತಿ) ಸಂಸ್ಥೆಯಲ್ಲಿ 6 ತಿಂಗಳ (ಡಿಸಿಎಂ) ಡಿಪ್ಲೊಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಯು ಇದೇ ಜನವರಿ, 01ರಿಂದ ಪ್ರಾರಂಭವಾಗಲಿದೆ. ಕೊಡಗು, ಹಾಸನ ಹಾಗೂ ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲ್ಲೂಕುಗಳಿಗೆ ಡಿಸಿಎಂ ತರಬೇತಿ ಸಂಸ್ಥೆಯ ವ್ಯಾಪ್ತಿಯಲ್ಲಿ ಬರಲಿದ್ದು, ಅರ್ಹರಿಂದ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂ.ಸಂ. 87926 28437, 9663153922, 8762925866, 8762110952, 9845318364ನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ಇನ್ಸ್ಟಿಟ್ಯೂಟ್ ಆಫ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್‌ನ ಪ್ರಾಂಶುಪಾಲರಾದ ಡಾ.ಆರ್.ಎಸ್.ರೇಣುಕಾ ಅವರು ತಿಳಿಸಿದ್ದಾರೆ.

## ರಾಜ್ಯ ಹೆದ್ದಾರಿಯ ಅಭಿವೃದ್ಧಿಗೆ ಆಗ್ರಹಿಸಿ ಪ್ರತಿಭಟನೆ




ವಿಟ್ಲ: ಆಟೋ ರಿಕ್ಷಾ, ಟೂರಿಸ್ಟ್ ಕಾರು, ಖಾಸಗಿ ಬಸ್, ಲಾರಿ ಮಾಲಕರ ಸಂಘದ ವತಿಯಿಂದ ವಿಟ್ಲ-ಉಕ್ಕುಡ -ಪಡಿಬಾಗಿಲು ಅಂತರ್ ರಾಜ್ಯ ಹೆದ್ದಾರಿಯ ರಸ್ತೆಯ ಅಭಿವೃದ್ಧಿಗೆ ಆಗ್ರಹಿಸಿ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಲಾಯಿತು. ಪ್ರತಿಭಟನಾ ಕಾರರು ರಾಜ್ಯ ಸರಕಾರದ ವಿರುದ್ಧ ಘೋಷಣೆ ಹಾಕಿ ರಸ್ತೆಯಲ್ಲಿ ಕುಳಿತು ಪ್ರತಿಭಟನೆ ಆರಂಭಿಸಿ, ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ಆಗಮಿಸುವ ವರೆಗೆ ಪ್ರತಿಭಟನೆ ಹಿಂಪಡೆಯುವುದಿಲ್ಲ ಎಂದು ಪಟ್ಟು ಹಿಡಿದರು. ಪ್ರತಿಭಟನಾ ಕಾರರನ್ನು ಸಮಾಧಾನ ಪಡಿಸಿದ ಅಧಿಕಾರಿಗಳು ಕೂಡಲೇ ಹೊಂಡಮುಚ್ಚುವ ಕೆಲಸ ಮಾಡಲಾಗುವುದು ಎಂದು ಭರವಸೆ ನೀಡಿದರು. ಬಳಿಲ ಪ್ರತಿಭಟನಾ ಕಾರರು ಪ್ರತಿಭಟನೆಯನ್ನು ಹಿಂಪಡೆದರು.

## ಮೋದಿ ಸರಕಾರ ಕಾರ್ಪೋರೇಟ್‌ಗಳಿಗೆ ಲಾಭ ಮಾಡಿಕೊಡುತ್ತಿದೆ




ಬಂಟ್ವಾಳ : ಕೇಂದ್ರ ಸರಕಾರದ ಕಾರ್ಮಿಕ ವಿರೋಧಿ ನೀತಿಗಳಿಂದ ಕಾರ್ಮಿಕರಿಗೆ ಇರುವ ಎಲ್ಲಾ ನ್ಯಾಯಯುತ ಸೌಲಭ್ಯಗಳನ್ನು ಕಸಿದುಕೊಳ್ಳಲಾಗಿದೆ ಎಂದು ಎ.ಐ.ಸಿ.ಸಿ.ಟಿ.ಯು ರಾಷ್ಟ್ರೀಯ ಅಧ್ಯಕ್ಷ ಕಾಮ್ರೇಡ್ ವಿ.ಶಂಕರ್ ಹೇಳಿದರು. ಎಐಸಿಸಿಟಿಯು ಪ್ರಥಮ ರಾಜ್ಯ ಸಮ್ಮೇಳನವು ಬಂಟ್ವಾಳದಲ್ಲಿ ನಡೆಯುತ್ತಿರುವುದು ಬಹಳ ಒಳ್ಳೆಯ ಬೆಳವಣಿಗೆ ಯಾಗಿದ್ದು ಮುಂದಿನ ದಿನಗಳಲ್ಲಿ ಕಾರ್ಮಿಕ ಚಳುವಳಿಯನ್ನು ಬಲಿಷ್ಠಗೊಳಿಸಲು ಇದು ಒಂದು ಹೆಜ್ಜೆಯಾಗಿದೆ ಎಂದರು. ಸಮ್ಮೇಳನದ ಅಧ್ಯಕ್ಷತೆ ವಹಿಸಿದ್ದ ಎಐಸಿಸಿಟಿಯು ರಾಜ್ಯ ಅಧ್ಯಕ್ಷ ಕಾಮ್ರೇಡ್ ಕ್ಲಿಫ್ಟನ್ ಡಿ ರೊಜಾರಿಯೋ ಮಾತನಾಡಿ, ಕಾರ್ಮಿಕರ ಸಮಸ್ಯೆಯನ್ನು ಯಾವುದೇ ಸರಕಾರ ಬಗೆಹರಿಸುತ್ತದೆ ಎಂಬ ಭ್ರಮೆಯಿಂದ ಹೊರ ಬಂದು ನಮ್ಮ ಸಂಘಟನೆ, ನಮ್ಮ ಸಿದ್ಧಾಂತ, ನಮ್ಮ ಹೋರಾಟದಿಂದ ಮಾತ್ರ ಬಗೆಹರಿಸಲು ಸಾಧ್ಯ ಎಂಬುದನ್ನು ಅರಿತು ಕಾರ್ಯ ಪ್ರವೃತ್ತರಾಗೋಣ ಎಂದು ಕರೆ ನೀಡಿದರು.

## ಪೇಜಾವರ ಸ್ವಾಮಿ ದೇಶ ಬಿಟ್ಟು ಹೋಗಲಿ–ಜಯನ್ ಮಲ್ಪೆ



ಮಲ್ಪೆ : ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಸೋದರತ್ವದ ತತ್ವಗಳ ಆಧಾರದ ಮೇಲೆ ರಚಿತವಾಗಿರುವ ನಮ್ಮ ಸಂವಿಧಾನವನ್ನು ಒಪ್ಪದ ಉಡುಪಿಯ ಪೇಜಾವರ ಮಠದ ಶ್ರೀವಿಶ್ವಪ್ರಸನ್ನತೀರ್ಥ ಸ್ವಾಮೀಜಿ ದೇಶ ಬಿಟ್ಟು ಹೋಗಲಿ ಎಂದು ದಲಿತ ಚಿಂತಕ ಹಾಗೂ ಜನಪರ ಹೋರಾಟಗಾರ ಜಯನ್ ಮಲ್ಪೆ ಹೇಳಿದ್ದಾರೆ. ಅಂಬೇಡ್ಕರ್ ಬರೆದ ಸಂವಿಧಾನ ಉಳಿದರೆ ಮಾತ್ರ ನಮ್ಮ ದೇಶದ ಸಮಗ್ರತೆ, ಸಂಸ್ಕೃತಿ ಮತ್ತು ಜನರ ಬದುಕು ಉಳಿಯುತ್ತದೆ. ನಮ್ಮ ಸಂವಿಧಾನವು ಎಲ್ಲಿಯವರೆಗೆ ಸುರಕ್ಷಿತವಾಗಿರುತ್ತದೆಯೋ ಅಲ್ಲಿಯವರೆಗೆ ನಾವೆಲ್ಲರು ಸುರಕ್ಷಿತವಾಗಿರುತ್ತೇವೆ. ಇಲ್ಲವೇ ನಾವೆಲ್ಲರೂ ನಾಶವಾಗುತ್ತೇವೆ ಎಂಬುದನ್ನು ಪೇಜಾವರ ಸ್ವಾಮೀಜಿ ಅರ್ಥಮಾಡಿಕೊಳ್ಳಲಿ ಎಂದರು.

## ಬುದ್ಧ ವಿಹಾರವನ್ನು ಬೌದ್ಧರಿಗೆ ನೀಡುವಂತೆ ಆಗ್ರಹಿಸಿ ಪ್ರತಿಭಟನೆ




ಉಡುಪಿ : ಬಿಹಾರದ ಬೋಧ್‌ಗಯಾದಲ್ಲಿರುವ ಮಹಾಬೋಧಿ ಬುದ್ಧ ವಿಹಾರದ ಆಡಳಿತವನ್ನು ಸಂಪೂರ್ಣವಾಗಿ ಬೌದ್ಧರಿಗೆ ಬಿಟ್ಟು ಕೊಡುವಂತೆ ಆಗ್ರಹಿಸಿ ಭಾರತೀಯ ಬೌದ್ಧ ಮಹಾಸಭಾದ ವತಿಯಿಂದ ಮಣಿಪಾಲದಲ್ಲಿರುವ ಜಿಲ್ಲಾಧಿಕಾರಿ ಕಚೇರಿ ಮುಂಭಾಗದಲ್ಲಿ ಧರಣಿ, ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು. ಬೋಧ್‌ಗಯಾದಲ್ಲಿರುವ ಮಹಾಬೋಧಿ ಬುದ್ಧ ವಿಹಾರ ಸಮಸ್ತ ಬೌದ್ಧರ ಶ್ರದ್ಧಾಕೇಂದ್ರವಾಗಿದೆ. ಆದರೆ ಈ ಮಹಾಬೋಧಿ ಬುದ್ಧ ವಿಹಾರದ ಆಡಳಿತ ಸಂಪೂರ್ಣವಾಗಿ ಬೌದ್ಧರ ಕೈಯಲ್ಲಿಲ್ಲ. ಇದು ಅನ್ಯಾಯ, ಹೀಗಾಗಿ ಮಹಾಬೋಧಿ ಬುದ್ಧ ವಿಹಾರದ ಆಡಳಿತ ಹಾಗೂ ಅಧಿಕಾರವನ್ನು ಸಂಪೂರ್ಣವಾಗಿ ಬೌದ್ಧರಿಗೆ ನೀಡುವಂತೆ ಧರಣಿ ನಿರತರು ಆಗ್ರಹಿಸಿದರು.

## ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ದಾರಿ ತಪ್ಪಿಸುವ ಪ್ರಯತ್ನ




ಉಡುಪಿ: ಕೇರಳದ ಪ್ಲಾಂಟೇಶನ್ ಕಾರ್ಪೊರೇಷನ್ ಗೋದಾಮು ಗಳಲ್ಲಿ ಉಳಿದಿದ್ದ ವಿಷಕಾರಕ ಕೀಟನಾಶಕ ಎಂಡೋ ಸಲ್ಫಾನ್‌ನ್ನು ಅಕ್ರಮವಾಗಿ ಮತ್ತು ಅವೈಜ್ಞಾನಿಕವಾಗಿ ಕರ್ನಾಟಕದ ಗಡಿಭಾಗವಾದ ಕೇರಳದ ಮಿಂಚಿನಪದವು ಗುಡ್ಡಗಾಡು ಪ್ರದೇಶದ ಪಾಳುಬಾವಿಯಲ್ಲಿ ಹೂಳಲಾಗಿದೆ ಎನ್ನಲಾದ ಪ್ರಕರಣದಲ್ಲಿ ಗೇರುತೋಟದಿಂದ ಸಂಗ್ರಹಿಸಿದ ಮಣ್ಣು ಮತ್ತು ನೀರಿನಲ್ಲಿ ಎಂಡೋಸಲ್ಫಾನ್ ಅಂಶ ಪತ್ತೆಯಾಗಿಲ್ಲ ಎಂದು ಕೇಂದ್ರೀಯ ಮಾಲಿನ್ಯ ನಿಯಂತ್ರಣ ಮಂಡಳಿ ನೀಡಿದೆ ಎನ್ನಲಾದ ವರದಿಯನ್ನು ಈ ಪ್ರಕರಣದ ಪ್ರಾರಂಭದಿಂದಲೂ ಎಂಡೋ ಸಂತ್ರಸ್ಥರ ಪರವಾಗಿ ಹೋರಾಟ ನಡೆಸುತ್ತಾ ಬಂದಿರುವ ಉಡುಪಿಯ ಮಾನವ ಹಕ್ಕುಗಳ ರಕ್ಷಣಾ ಪ್ರತಿಷ್ಠಾನದ ಅಧ್ಯಕ್ಷ ಡಾ.ರವೀಂದ್ರನಾಥ್ ಶಾನುಭಾಗ್ ಖಂಡಿಸಿದ್ದಾರೆ.

## ಕೇಂದ್ರದ ಯೋಜನೆಗಳು ಜನಸಾಮಾನ್ಯರಿಗೆ ತಲುಪಲಿ




ಉಡುಪಿ : ಕೇಂದ್ರ ಸರಕಾರದ ಪ್ರತಿಯೊಂದು ಯೋಜನೆಯು ಜನಸಾಮಾನ್ಯರಿಗೆ ತಲುಪಬೇಕಾದ್ದರಿಂದ ಅಧಿಕಾರಿ ಗಳು ಶ್ರದ್ಧೆಯಿಂದ ಕರ್ತವ್ಯ ನಿರ್ವಹಿಸಬೇಕು ಎಂದು ಉಡುಪಿ-ಚಿಕ್ಕಮಗಳೂರು ಲೋಕಸಭಾ ಸದಸ್ಯ ಕೋಟ ಶ್ರೀನಿವಾಸ ಪೂಜಾರಿ ಅಧಿಕಾರಿಗಳಿಗೆ ತಾಕೀತು ಮಾಡಿದ್ದಾರೆ. ಮುಂದಿನ ತಿಂಗಳು ನಡೆಯುವ ಸಂಸದರ ತ್ರೈಮಾಸಿಕ ಪ್ರಗತಿ ಪರಿಶೀಲನ ಸಭೆಯ ಪೂರ್ವ ಸಿದ್ಧತೆ ಕುರಿತು ಚರ್ಚಿಸಲು ಕರೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಕೋಟ, ಗಣಿ ಇಲಾಖೆಯ ಮೂಲಕ ಜಿಲ್ಲೆಯಲ್ಲಿ ಸಂಗ್ರಹವಾದ ಹಣವನ್ನು ಯಾವ ಪ್ರದೇಶಗಳಿಂದ ಗಣಿಗಾರಿಕೆ ನಡೆಯುತ್ತೋ ಅದೇ ಪಂಚಾಯತ್ ವ್ಯಾಪ್ತಿಯ ರಸ್ತೆ ನಿರ್ಮಾಣಕ್ಕೆ ಪ್ರಾಧಾನ್ಯತೆ ನೀಡ ಬೇಕಾಗಿದೆ ಎಂಬ ಸೂತ್ರದಡಿ ವೆಚ್ಚ ಮಾಡಬೇಕಾಗಿದೆ ಮತ್ತು ಪ್ರಧಾನಮಂತ್ರಿ ಖನಿಜ ಕ್ಷೇತ್ರ ಕಲ್ಯಾಣ (ಪಿಎಂ ಕೆಕೆಕೆವೈ) ಯೋಜನೆಯ ಕಾರ್ಯಕ್ರಮದಡಿ ಹಣಕಾಸು ಹಂಚಿಕೆ ಪಾರದರ್ಶಕವಾಗಿರಬೇಕು ಎಂದು ಸಲಹೆ ನೀಡಿದರು.

## ಸಂವಿಧಾನ ಸನ್ಮಾನ್ ಅಭಿಯಾನಕ್ಕೆ ಚಾಲನೆ



ಮಂಗಳೂರು: ಕೇಂದ್ರದಲ್ಲಿ ಕಾಂಗ್ರೆಸ್ ಆಡಳಿತ ನಡೆಸಿದ 65 ವರ್ಷಗಳಲ್ಲಿ ಸಂವಿಧಾನಕ್ಕೆ ತಿದ್ದುಪಡಿ ತಂದು ಅಪಚಾರ ಎಸಗಿದೆ. ಅಲ್ಲದೆ ಸಂವಿಧಾನಶಿಲ್ಪಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್‌ಗೂ ಅಪಮಾನ ಮಾಡಿದೆ. ನರೇಂದ್ರ ಮೋದಿ ಪ್ರಧಾನಿಯಾದ ಬಳಿಕ ಸಂವಿಧಾನಕ್ಕೆ ತಿದ್ದುಪಡಿಸಿ ತಂದು ದಲಿತರಿಗೆ ಗೌರವ ನೀಡಿದ್ದಾರೆ. ಅಲ್ಲದೆ ಅಂಬೇಡ್ಕರ್ ಆಶಯವನ್ನು ಸಾಕಾರಗೊಳಿಸುತ್ತಿದ್ದಾರೆ ಎಂದು ಮಾಜಿ ಸಚಿವ ಎನ್.ಮಹೇಶ್ ಹೇಳಿದ್ದಾರೆ. ಸಿಟಿಜನ್ ಫಾರ್ ಸೋಶಿಯಲ್ ಜಸ್ಟೀಸ್ ವತಿಯಿಂದ ನಗರದ ಸ್ಕೌಟ್ ಆಂಡ್ ಗೈಡ್ಸ್ ಭವನದಲ್ಲಿ ನಡೆದ ಸಂವಿಧಾನ ದಿನ-ಸಂವಿಧಾನ ಸನ್ಮಾನ್ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

## ವಿದ್ಯಾರ್ಥಿಗಳಿಗೆ ಸಂವಿಧಾನದ ಮಹತ್ವ ತಿಳಿಸುವುದು ಅಗತ್ಯ : ಕಾಮತ್



ಮಂಗಳೂರು : ವಿಶ್ವದಲ್ಲೇ ಅತಿದೊಡ್ಡ ಪ್ರಜಾಪ್ರಭುತ್ವವಾಗಿರುವ ಭಾರತ ಸಂವಿಧಾನದ ಮಹತ್ವವನ್ನು ವಿದ್ಯಾರ್ಥಿಗಳಿಗೆ ತಿಳಿಸುವ ನಿರಂತರ ಪ್ರಯತ್ನಗಳಾಗಬೇಕು ಎಂದು ಮಂಗಳೂರು ದಕ್ಷಿಣ ಶಾಸಕ ವೇದವ್ಯಾಸ ಕಾಮತ್ ಹೇಳಿದರು. ಅವರು ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಂಗಳೂರು ಮಹಾನಗರ ಪಾಲಿಕೆ ಮತ್ತು ಸಮಾಜ ಕಲ್ಯಾಣ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಡಾ॥ ಬಿ. ಆರ್. ಅಂಬೇಡ್ಕರ್ ಭವನದಲ್ಲಿ ನಡೆದ ಭಾರತ ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಸಂವಿಧಾನದಲ್ಲಿ ಪ್ರತಿಯೊಬ್ಬ ವ್ಯಕ್ತಿಗೂ ಸ್ಥಾನಮಾನ ಗೌರವವನ್ನು ನೀಡಲಾಗಿದೆ. ಸಂವಿಧಾನ ಕರ್ತರು ಭಾರತದ ನೆಲ,ಸಂಸ್ಕೃತಿ ಮತ್ತು ಸಾಮಾಜಿಕ ಹಿನ್ನೆಲೆಯನ್ನು ಗಮನದಲ್ಲಿಟ್ಟುಕೊಂಡು ಇಲ್ಲಿಗೆ ಪೂರಕವಾದ ಕಾನೂನುಗಳನ್ನು ಜಾರಿಗೆ ತರಲು ಶ್ರಮಿಸಿದ್ದಾರೆ. ವಿಶ್ವದ ಎಲ್ಲಾ ಸಂವಿಧಾನಗಳ ಸಾರವನ್ನು ಅರಿತುಕೊಂಡು, ಭಾರತದ ಸಂವಿಧಾನವನ್ನು ಜಾರಿಗೆ ತರಲಾಗಿದೆ ಎಂದು ಅವರು ಹೇಳಿದರು.

## ಮಲೆಕುಡಿಯರಿಗೆ ನ್ಯಾಯ ಒದಗಿಸಲು ಆಗ್ರಹ




ಮಂಗಳೂರು: 2011ರಲ್ಲಿ ಕುದುರೆಮುಖ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯ ನಿರಾಶ್ರಿತ ಕುಟುಂಬಗಳು ಸುಳ್ಯೇರಿ ಗ್ರಾಮದ ಸರ್ವೆ ನಂಬರ್ 65/1ಪಿ1ರ ಸರ್ಕಾರಿ ಜಮೀನಿನಲ್ಲಿ ಗುಡಿಸಲು ಕಟ್ಟಿಕೊಂಡು ವಾಸವಾಗಿದ್ದ ಸಂದರ್ಭದಲ್ಲಿ ಆಡಳಿತ ವ್ಯವಸ್ಥೆ ಅವರ ಮೇಲೆ ದೌರ್ಜನ್ಯವೆಸಗಿತ್ತು. ಮುಂದೆ ಅನೇಕ ಹೋರಾಟಗಳು ನಡೆದು ಜಿಲ್ಲಾಡಳಿತ 190ಎಕ್ರೆ ಜಮೀನನ್ನು ಗಿರಿಜನ ಪುನರ್ವಸತಿಗೆ ಎಂದು ಮೀಸಲು ಇಟ್ಟು ಆದೇಶವನ್ನು ಮಾಡಿರುತ್ತದೆ. ಇದೆ ಸಂದರ್ಭದಲ್ಲಿ ಒಂದಷ್ಟು ಪ್ರಭಾವಿ ವ್ಯಕ್ತಿಗಳು ತಮ್ಮ ಪ್ರಭಾವ ಬಳಸಿ ಆ ಐದು ಕುಟುಂಬಗಳು ವಾಸವಾಗಿದ್ದ ಜಮೀನನ್ನು ಬೆಳ್ತಂಗಡಿ ತಾಲೂಕು ಪಂಚಾಯತ್‌ಗೆ ಸಾರ್ವಜನಿಕ ಉದ್ದೇಶಕ್ಕೆ 15 ವರ್ಷ ಪರಭಾರೆ ನಿಷೇಧ ಮಾಡಬಾರದು ಎಂಬ ಷರತ್ತಿನೊಂದಿಗೆ ಮೀಸಲಿಡಲಾಗುತ್ತದೆ. ಒಂದು ತಿಂಗಳ ಒಳಗಾಗಿ ಜಿಲ್ಲಾಡಳಿತ ಸೂಕ್ತ ಸ್ಪಂದನೆಯನ್ನು ನೀಡದೆ ಇದ್ದಲ್ಲಿ ಜಿಲ್ಲಾಧಿಕಾರಿಗಳ ಕಛೇರಿ ಮುಂದೆ ಅಹೋರಾತ್ರಿ ಧರಣಿ ನಡೆಸಬೇಕಾಗುತ್ತದೆ ಎಂಬ ಎಚ್ಚರಿಕೆಯನ್ನೂ ಜಿಲ್ಲಾಡಳಿತಕ್ಕೆ ಮಾಧ್ಯಮಗಳ ಮೂಲಕ ತಿಳಿಸಲು ಬಯಸುತ್ತೇವೆ ಎಂದು ಮಲೆಕುಡಿಯರ ಸಂಘದ ಅಧ್ಯಕ್ಷ ಶ್ರೀದರ್ ಗೌಡ ಹೇಳಿದರು.

## ಮೀರ್ ಗ್ರೂಪ್ ಮಂಗಳೂರಲ್ಲಿ ಬಂಡವಾಳ ಹೂಡಿಕೆ



ಮಂಗಳೂರು: ನಗರದ ಓಷನ್ ಪರ್ಲ್ ಹೋಟೆಲ್ ಸಭಾಂಗಣದಲ್ಲಿ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಅವರ ಸಮಕ್ಷಮದಲ್ಲಿ ಎಂಎಸ್‌ಇಝುಡ್ ಸಿಇಒ ಸೂರ್ಯನಾರಾಯಣ ರಾವ್ ಹಾಗೂ ಮೀರ್ ಗ್ರೂಪ್‌ನ ಮುಖ್ಯಸ್ಥ ರಫೇಲೆ ಮರಾರ್ಝೊ ಅವರು ಒಪ್ಪಂದ ಪತ್ರಗಳನ್ನು ವಿನಿಮಯ ಮಾಡಿಕೊಂಡರು. ಮಂಗಳೂರಿನಲ್ಲಿ ಇಟಲಿ ಕಂಪನಿ ಹೂಡಿಕೆಗೆ ಬಲವಾದ ಬೆಂಬಲ ನೀಡಿದ್ದಾರೆ. ಈ ಮೂಲಕ 1500ಕೋಟಿ ರೂ.ನಷ್ಟು ಹೂಡಿಕೆಯಾಗಲಿದ್ದು, ಜಿಲ್ಲೆಯಲ್ಲಿ 500-600 ಮಂದಿಗೆ ಉದ್ಯೋಗಾವಕಾಶ ಲಭಿಸಲಿದೆ. "ಬ್ಯಾಕ್ ಟು ಊರು" ಎಂಬ ಉಪಕ್ರಮದೊಂದಿಗೆ ಜಿಲ್ಲೆಗೆ ಅಭಿವೃದ್ಧಿಯ ಬಗ್ಗೆ ಉತ್ಸುಕರಾಗಿದ್ದೇವೆ. ಇಂದು ಇಟಲಿಯ ಕಂಪನಿ ಮಂಗಳೂರಿನ ಎಸ್ ಈ ಝುಡ್ ನಲ್ಲಿ ಹೂಡಿಕೆ ಮಾಡಲು ಮುಂದಾಗಿದೆ ಎಂದು ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಹೇಳಿದರು.

## ರಾಜಕಾರಣಿಗಳ ಮಕ್ಕಳನ್ನು ಸರಕಾರಿ ಶಾಲೆಗೆ ಸೇರಿಸಬೇಕು: ಡಾ. ನಿರ್ಮಲಾನಂದನಾಥ ಶ್ರೀ




ಮಂಗಳೂರು: ಸರಕಾರಿ ಶಾಲೆಗಳು ಉಳಿಯಬೇಕಾದರೆ ಸರಕಾರಿ ಉದ್ಯೋಗಿಗಳ ಮಕ್ಕಳನ್ನು ಮತ್ತು ರಾಜಕಾರಣಿಗಳ ಮಕ್ಕಳನ್ನು ಸರಕಾರಿ ಶಾಲೆಗೆ ಸೇರಿಸಬೇಕು ಎಂದು ಶ್ರೀ ಕ್ಷೇತ್ರ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿ ಅಭಿಪ್ರಾಯ ಪಟ್ಟರು. ರಾಜಕಾರಣಿಗಳ ಮಕ್ಕಳು ಸರಕಾರಿ ಶಾಲೆಯಲ್ಲಿ ಓದಿದರೆ ಅಲ್ಲಿಯ ವ್ಯವಸ್ಥೆ ಸುಧಾರಿಸಲು ಸಹಕಾರಿಯಾಗುತ್ತದೆ. ಸಮಾಜದ ದುರ್ಬಲ ವರ್ಗದವರಿಗೆ ಶಿಕ್ಷಣ ನೀಡಬೇಕು ಎಂಬ ತುಡಿತದಿಂದ ಶ್ರೀ ಡಾ. ಬಾಲಗಂಗಾಧರನಾಥ ಮಹಾಸ್ವಾಮೀಜಿ ಅವರು ಆದಿಚುಂಚನಗಿರಿ ಮಠದಿಂದ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿದರು. ಬಡವರ್ಗದ ಬುದ್ಧಿವಂತ ಮಕ್ಕಳಿಗೂ ಅತ್ಯುನ್ನತ ಮಟ್ಟದ ಶಿಕಣ ದೊರೆಯಬೇಕು ಎಂಬ ದೃಷ್ಟಿಯಿಂದ ಆರನೇ ತರಗತಿಯಿಂದ ಉನ್ನತ ಶಿಕ್ಷಣದವರೆಗೆ ಶಿಕ್ಷಣ ನೀಡುವ ಶಾಲೆಗಳನ್ನು ಶೀಘ್ರ ಸ್ಥಾಪಿಸಲಾಗುವುದು ಎಂದರು.

## ಹೆದ್ದಾರಿ ದುರಸ್ತಿಗೆ ಆಗ್ರಹಿಸಿ ಧರಣಿ



ಕೂಳೂರು: ರಾಷ್ಟ್ರೀಯ ಹೆದ್ದಾರಿಯ ಅವ್ಯವಸ್ಥೆ ಹಾಗೂ ಹೆದ್ದಾರಿ ಪೂರ್ಣ ಪ್ರಮಾಣದಲ್ಲಿ ಶೀಘ್ರ ದುರಸ್ತಿಗೊಳಿಸಿ ಡಾಮರೀಕರಣ ಮಾಡಲು ಆಗ್ರಹಿಸಿ ಸುರತ್ಕಲ್ ಟೋಲ್ ಗೇಟ್ ವಿರೋಧಿ ಹೋರಾಟ ಸಮಿತಿ ಮಂಗಳವಾರ ನಡೆಸಿದ್ದ ಧರಣಿಯಲ್ಲಿ ಭಾಗವಹಿಸಿದ್ದ ಹೋರಾಟಗಾರರ ವಿರುದ್ಧ ಕಾವೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ನಂತೂರು-ಸುರತ್ಕಲ್ ರಾಷ್ಟ್ರಿಯ ಹೆದ್ದಾರಿಯನ್ನು ಪೂರ್ಣ ಪ್ರಮಾಣದಲ್ಲಿ ದುರಸ್ತಿ ಮಾಡುಬೇಕು ಮತ್ತು ಕೂಳೂರು ಸೇತುವೆಯನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಬೇಕೆಂದು ಆಗ್ರಹಿಸಿ ಸುರತ್ಕಲ್ ಟೋಲ್ ಗೇಟ್ ವಿರೋಧಿ ಹೋರಾಟ ಸಮಿತಿಯ ಸಂಚಾಲಕ ಮುನೀರ್ ಕಾಟಿಪಳ್ಳ ಮತ್ತು ಇತರರು ಕೂಳೂರು ಸೇತುವೆಯ ಬಳಿ ಗುಂಪುಗೂಡಿ ಸಾರ್ವಜನಿಕರಿಗೆ ತೊಂದರೆಯಾಗುವ ರೀತಿ ಕೂಳೂರು ಸೇತುವೆಯ ಬಳಿ ಧರಣಿ ನಡೆಸಿದ್ದಾರೆ. ಅಲ್ಲದೆ, ಎಚ್ಚರಿಕೆ ನೀಡುವ ಘೋಷಣೆಗಳನ್ನು ಕೂಗಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

## ಬಂಟ್ವಾಳ ಪುರಸಭೆ, ಗ್ರಾಮ ಪಂಚಾಯತ್‌ನಲ್ಲಿ ಕಾಂಗ್ರೆಸ್ ಮೇಲುಗೈ



ಬಂಟ್ವಾಳ: ತಾಲೂಕಿನ ಬಂಟ್ವಾಳ ಪುರಸಭೆಯಲ್ಲಿ ತೆರವಾಗಿರುವ ಒಂದು ಸ್ಥಾನಕ್ಕೆ ಹಾಗೂ ಗ್ರಾ.ಪಂ.ಗಳಲ್ಲಿ ತೆರವಾದ 11 ಸ್ಥಾನಗಳಿಗೆ ನ. 23ರಂದು ಮತದಾನ ನಡೆದಿದ್ದು, ಮಂಗಳವಾರ ಫಲಿತಾಂಶ ಹೊರಬಿದ್ದಿದೆ. ಕಾಂಗ್ರೆಸ್ ಮೇಲುಗೈ ಸಾಧಿಸಿ ಗೆಲುವಿನ ನಗೆ ಬೀರಿದರೆ, ಬಿಜೆಪಿ ಒಂದು ಸ್ಥಾನ ಕಳೆದುಕೊಂಡಿದ್ದು, ಎಸ್.ಡಿ.ಪಿ.ಐ.ಎಲ್ಲಾ ಸ್ಥಾನವನ್ನು ಕಳೆದುಕೊಂಡು ಹಿನ್ನಡೆ ಅನುಭವಿಸಿದೆ. ಪುರಸಭೆಯ 2ನೇ ವಾರ್ಡ್‌ನ ಸದಸ್ಯ ಸ್ಥಾನಕ್ಕೆ ನಡೆದ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪುರುಷೋತ್ತಮ ಪೂಜಾರಿ ಅವರು ಬಿಜೆಪಿ ಅಭ್ಯರ್ಥಿ ಇಂದ್ರೇಶ್ ವಿರುದ್ಧ ಸುಮಾರು 40 ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ವಿವಿಧ ಗ್ರಾ.ಪಂ.ನಲ್ಲಿ ಒಟ್ಟು 11 ಸ್ಥಾನಗಳಿಗೆ ನಡೆದ ಉಪ ಚುನಾವಣೆಯಲ್ಲಿ 9 ಸ್ಥಾನಗಳಲ್ಲಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳು ವಿಜಯ ಸಾಧಿಸಿದರೆ 2 ಕ್ಷೇತ್ರದಲ್ಲಿ ಬಿಜೆಪಿ ಬೆಂಬಲಿತ ಅಭ್ಯರ್ಥಿಗಳು ಗೆಲುವು ಸಾಧಿಸಿದ್ದಾರೆ.



ಕರಾವಳಿ ತರಂಗಿಣಿ

# ಸಿನಿ ತರಂಗಿಣಿ

## "ಮ್ಯಾಕ್ಸ್" ಬಿಡುಗಡೆ ದಿನಾಂಕ ಫಿಕ್ಸ್..



ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ಅಬಿನಯದ ಆಕ್ಷನ್ ಚಿತ್ರ "ಮ್ಯಾಕ್ಸ್" ಇದೇ ಡಿಸೆಂಬರ್ 25ರಂದು ಬಿಡುಗಡೆ ಆಗುವುದಾಗಿ ಚಿತ್ರ ತಂಡ ಘೋಷಿಸಿದೆ. ಚಿತ್ರದ ರಿಲೀಸ್ ದಿನಾಂಕವನ್ನು ತಿಳಿಸಿ ಎಂಬ ಅಭಿಮಾನಿಗಳ ಬಹು ಕಾಲದ ಬೇಡಿಕೆಯನ್ನು ಚಿತ್ರ ತಂಡ ಇಂದು ಪೂರೈಸಿದೆ. "ಮ್ಯಾಕ್ಸ್" ಒಂದು ಮಾಸ್ ಚಿತ್ರವಾಗಿದ್ದು, ಇದನ್ನು ವಿಜಯ್ ಕಾರ್ತಿಕೇಯ ನಿರ್ದೇಶಿಸಿದ್ದಾರೆ. ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್, ವರಲಕ್ಷ್ಮೀ ಶರತ್ ಕುಮಾರ್, ಸಂಯುಕ್ತ ಹೊರನಾಡು, ಪ್ರಮೋದ್ ಶೆಟ್ಟಿ, ಮುಂತಾದವರು ನಟಿಸಿದ್ದಾರೆ. ಚಿತ್ರಕ್ಕೆ ಅಜನೀಶ್ ಲೋಕನಾಥ್ ಸಂಗೀತ ಸಂಯೋಜನೆ ಮಾಡಿದ್ದಾರೆ, ಕಲೈಪುಲಿ ಎಸ್ ತನು ವಿ ಕ್ರಿಯೇಷನ್ಸ್ ಬ್ಯಾನರ್ ಹಾಗೂ ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ಕಿಚ್ಚ ಕ್ರಿಯೇಷನ್ಸ್ ಬ್ಯಾನರ್ ಅಡಿಯಲ್ಲಿ ಚಿತ್ರವನ್ನು ನಿರ್ಮಿಸಿದ್ದಾರೆ.

## ಬಂಡೆ ಮಾಕಾಳಮ್ಮ ದೇವಸ್ಥಾನದಲ್ಲಿ "ಎಕ್ಕ"



ವಿಜಯ್ ಕಿರಗಂದೂರ್ ಅವರ ಪತ್ನಿ ಶ್ರೀಮತಿ ಶೈಲಜಾ ವಿಜಯ್ ಕ್ಲಾಪ್ ಮಾಡುವ ಮೂಲಕ "ಎಕ್ಕ" ಚಿತ್ರಕ್ಕೆ ನಾಂದಿ ಹಾಡಲಾಯಿತು, ಮೊದಲ ಶಾಟ್‌ನ್ನು ನಟರಾಕ್ಷಸ ಡಾಲಿ ಧನಂಜಯ್ ನಿರ್ದೇಶಿಸಿದ್ದು, ನಿರ್ಮಾಪಕ ಕಾರ್ತಿಕ ಗೌಡ ಅವರ ತಾಯಿ ಶ್ರೀಮತಿ ವಿಜಯಲಕ್ಷ್ಮೀ ರಾಮಕೃಷ್ಣ ಕ್ಯಾಮೆರಾ ಬಟನ್ ಆನ್ ಮಾಡುವ ಮೂಲಕ ಚಾಲನೆ ನೀಡಿದರು. ಕಾಶ್ಮೀರ, ಬೆಂಗಳೂರು, ಮೈಸೂರು, ದೆಹಲಿ, ಕೋಲ್ಕತ್ತಾ, ಮುಂಬೈ ಸೇರಿದಂತೆ ಹಲವಾರು ಸ್ಥಳಗಳಲ್ಲಿ "ಎಕ್ಕ" ಚಿತ್ರದ ಚಿತ್ರೀಕರಣ ನಡೆಯುವುದಾಗಿ ತಂಡ ತಿಳಿಸಿದೆ. ಚಿತ್ರದ ನರ್ದೇಶಕ ರೋಹಿತ್ ಪದಕಿ ಮಾತನಾಡಿ, ಎಕ್ಕ ಒಂದು ಮೆಗಾ ಚಿತ್ರವಾಗಿದ್ದು, ಇದರ ಜವಾಬ್ದಾರಿ ಹೊತ್ತಿರುವ ಹೆಮ್ಮೆ ನನಗಿದೆ. ಚಿತ್ರ ಜನರ ಮೇಲೆ ಭಾವನಾತ್ಮಕ ಪ್ರಭಾವ ಬೀರಲಿದೆ" ಎಂದು ತಿಳಿಸಿದರು.

## ಮುಂಗಾರು ಮಳೆ ನಂತರ "ಮನದ ಕಡಲು"




ಹದಿನೆಂಟು ವರ್ಷಗಳ ಹಿಂದೆ ಇ. ಕೆ. ಎಂಟರ್ ಟೈನರ್ಸ್ ಲಾಂಛನದಲ್ಲಿ ಇ. ಕೃಷ್ಣಪ್ಪ ಅವರು ನಿರ್ಮಿಸಿ, ಯೋಗರಾಜ್ ಭಟ್ ನಿರ್ದೇಶಿಸಿದ್ದ ಸೂಪರ್ ಹಿಟ್ ಚಲನಚಿತ್ರ "ಮುಂಗಾರು ಮಳೆ". ಇಷ್ಟು ವರ್ಷಗಳ ಬಳಿಕ ಈ ಜೋಡಿ ಮತ್ತೆ ಒಂದಾಗಿದೆ. ಇ. ಕೃಷ್ಣಪ್ಪ ನಿರ್ಮಾಣದಲ್ಲಿ ಯೋಗರಾಜ್ ಭಟ್ ನಿರ್ದೇಶಿಸುತ್ತಿರುವ ನೂತನ ಚಿತ್ರದ ಹೆಸರು "ಮನದ ಕಡಲು" ಸುಮುಖ ಈ ಚಿತ್ರದ ನಾಯಕನಾಗಿ, ರಾಶಿಕಾ ಶೆಟ್ಟಿ ಮತ್ತು ಅಂಜಲಿ ಅನೀಶ್ ನಾಯಕಿಯರಾಗಿ ಹಾಗೂ ರಂಗಾಯಣ ರಘು ಪ್ರಮುಖಪಾತ್ರದಲ್ಲಿ ನಟಿಸುತಿದ್ದಾರೆ. ಜಿ. ಗಂಗಾಧರ್ ಈ ಚಿತ್ರದ ಸಹ ನಿರ್ಮಾಪಕರು. ಬೆಂಗಳೂರಿನ ಅರಮನೆ ಆವರಣದಲ್ಲಿ ಬಿರುಸಿನ ಚಿತ್ರೀಕರಣ ನಡೆಯು ತ್ತಿದ್ದು, ಚಿತ್ರತಂಡ ಮಾಧ್ಯಮದ ಮಿತ್ರರನ್ನು ಚಿತ್ರೀಕರಣ ವೀಕ್ಷಣೆ ಹಾಗೂ ಪತ್ರಿಕಾಗೋಷ್ಠಿಗೆ ಆತ್ಮೀಯವಾಗಿ ಆಹ್ವಾನಿಸಿತ್ತು. ಅದ್ದೂರಿಯಾಗಿ ಕರ್ನಾಟಕ ಮತ್ತು ಮಹಾರಾಷ್ಟ್ರಗಳಲ್ಲಿ ಚಿತ್ರೀಕರಣ ಮಾಡಲಾಗಿದೆ.

## ಹೊಸ ವರ್ಷದಲ್ಲಿ ತೆರೆಗೆ "ಎಕ್ಸ್ ಅಂಡ್ ವೈ"



"ಎಕ್ಸ್ ಅಂಡ್ ವೈ" ಸತ್ಯಪ್ರಕಾಶರ ನಿರ್ದೇಶನದ ನಾಲ್ಕನೇ ಚಿತ್ರ. ಮೊದಲ ಮೂರು ಚಿತ್ರಗಳು ರಾಮಾ ರಾಮಾ ರೇ, ಒಂದಲ್ಲಾ ಎರಡಲ್ಲಾ ಮತ್ತು ಮ್ಯಾನ್ ಆಫ್ ದಿ ಮ್ಯಾಚ್. ಒಂದಕ್ಕಿಂತ ಒಂದು ಭಿನ್ನ ಕಥಾ ಮಾಲಿಕೆಯ ಚಿತ್ರಗಳಾಗಿವೆ. "ರಾಮ ರಾಮಾ ರೇ" ಉತ್ತಮ ಚಿತ್ರವೆಂದು ರಾಜ್ಯ ಪ್ರಶಸ್ತಿ ಪಡೆದರೆ, ಒಂದಲ್ಲಾ ಎರಡಲ್ಲಾ ಚಿತ್ರವು ಎರಡು ರಾಷ್ಟ್ರ ಪ್ರಶಸ್ತಿಗಳನ್ನು ಮುಡಿಗೇರಿಸಿಕೊಂಡಿದೆ. ಇನ್ನೇನು ಬಿಡುಗಡೆಯ ಅಂಚಿಗೆ ಬಂದಿರುವ ಕನ್ನಡದ "ಎಕ್ಸ್ ಅಂಡ್ ವೈ" ಚಿತ್ರದಲ್ಲಿ ಆಟೋರಿಕ್ಷಾ ಆಂಬು ಆಟೋ ಆಗಿ ಬಡ್ತಿ ಪಡೆದು ಎಲ್ಲರ ಗಮನ ಸೆಳೆದಿದೆ. ಆಂಬುಲೆನ್ಸ್‌ನಲ್ಲಿರುವಂತೆ ಎಲ್ಲಾ ಸೌಲಭ್ಯಗಳನ್ನು ಆಟೋದಲ್ಲಿ ಅಳವಡಿಸಿ ಚಿತ್ರದಲ್ಲಿ ಅದನ್ನೊಂದು ಕಲಾವಿದನೆಂಬಂತೆ ಕಲಾತ್ಮಕವಾಗಿ ಬಳಸಲಾಗಿದೆ. "ಎಕ್ಸ್ ಅಂಡ್ ವೈ" ಸಿನಿಮಾ ಚಿತ್ರಮಂದಿರಗಳಲ್ಲಿ ಮುಂಬರುವ ಜನವರಿ ಅಥವಾ ಫೆಬ್ರವರಿಯಲ್ಲಿ ತೆರೆಕಾಣಲಿದೆ.


29-11-2024 ರಿಂದ ರಾಜ್ಯಾದ್ಯಂತ




ಬೆಂಗಳೂರು ಕೆ.ಜಿ ರಸ್ತೆ **ಸ್ವಪ್ನ**

ರಾಜಾಜಿನಗರ ನವರಂಗ್
ಜೆ.ಪಿ ನಗರ ಸಿದ್ಧಲಿಂಗೇಶ್ವರ
ಉಲ್ಲಾಲ ವಜ್ರೇಶ್ವರಿ
ಕತ್ರಿಗುಪ್ಪೆ ಕಾಮಾಕ್ಯ
ಯಶವಂತಪುರ ಗೋವರ್ಧನ್
ಹಲಿನಗರ ವಿನಾಯಕ
ಗೊಲ್ಲರಹಟ್ಟಿ ವೆಂಕಟೇಶ್ವರ
ಲಗ್ಗೆರೆ ಆಕಾಶ್
ಚಿಕ್ಕಬಾಣಾವರ ಅಶೋಕ
ಉತ್ತರಹಳ್ಳಿ ವೈಷ್ಣವಿ
ಅತ್ತಿಬೆಲೆ ಗೌರಿಶಂಕರ್

PVR INOX: NEXUS, ORION, VAISHNAVI, REGALIA, MARKET CITY, VR MALL, AURA, SPIRIT, VEGACITY, GT WORLD, GLOBAL MALL, MANTHRI, SWAGATH, CENTRAL, GARUDA, VALUEMALL, LIDO, BROOKFIELD, SBR, YELAHANKA, REX, FALCONCITY, UPTOWN, BHARTIYA, NEXUS NEIGHBOURHOOD

Cinépolis: LULU MALL, ROYAL MEENAKSHI, ETA, FUN SIGMA, ORION EAST, SHANTINIKETAN

GOPALAN CINEMAS: ARCH, INNOVATION, GRAND, LEGACY, SIGNATURE

ROCKLINE JALAHALLI
KINO CINEMAS SEEGEHALLI
INNOVATIVE MARATHHALLI
MIRAJ SUNKADAKATTE
MUKTA A2 UTTARAHALLI
CINEPHILE HSR LAYOUT

ದೊಡ್ಡಬಳ್ಳಾಪುರ ಸೌಂದರ್ಯ ಮಹಲ್
ತುಮಕೂರು INOX
ತಿಪಟೂರು ಗಣೇಶ್
ಸಿರಾ ರಂಗನಾಥ್
ಕುಣಿಗಲ್ ಶಿವಗಂಗಾ
ಮೈಸೂರು DRC, PVR INOX, VISION CINEMAS
ಮಂಡ್ಯ
ಹಾಸನ
ಕೊಳ್ಳೇಗಾಲ ಶ್ರೀನಿವಾಸ
ಚಾಮರಾಜನಗರ
ಮಳವಳ್ಳಿ ರಾಜರಾಜೇಶ್ವರಿ

ಅರಸಿಕೆರೆ ರತ್ನ
ಟಿ.ನರಸೀಪುರ ಮುರುಗನ್
ಚನ್ನರಾಯಪಟ್ಟಣ ಧನಲಕ್ಷ್ಮೀ
ಶಿವಮೊಗ್ಗ Bharath Cinemas
ದಾವಣಗೆರೆ MOVIE TIME
ಚಿತ್ರದುರ್ಗ
ಚಳ್ಳಕೆರೆ
ಹರಿಹರ
ಹಿರಿಯೂರು
ಬಳ್ಳಾರಿ ನಟರಾಜ್ ಕಾಂಪ್ಲೆಕ್ಸ್
ಹುಬ್ಬಳ್ಳಿ
ಬೆಳಗಾಂ
ಧಾರವಾಡ
ವಿಜಯ್
ಬಿಜಾಪುರ ಅಮೀರ್
ಮುಧೋಳ್ ಸುಭಾಷಿಣಿ

ಗೋಕಾಕ್ ಕರ್ನಾಟಕ
ಬ್ಯಾಡಗಿ ಶೋಭಾ
ಗುಲ್ಬರ್ಗಾ ತ್ರಿವೇಣಿ
ಸಿಂಧನೂರು ಸಂಗಮೇಶ್ವರ
ಹುಬ್ಬಳ್ಳಿ INOX, Cinépolis
ಬೆಳಗಾಂ Bharath Cinemas, INOX
ಬೀದರ್ sapna MULTIPLEX
ಗುಲ್ಬರ್ಗಾ INOX, SHETTY, MUKTA A2, MIRAJ
ನಿಪ್ಪಾಣಿ ಮ್ಯಾಗ್ನಮ್

ರಾಯಚೂರು MUKTA A2
ಮಂಗಳೂರು PVR INOX, Cinépolis, Bharath Cinemas
ಮಣಿಪಾಲ Bharath Cinemas, INOX
ಕುಂದಾಪುರ Bharath Cinemas
ಸುರತ್ಕಲ್ Cine GALAXY
ಪಡುಬಿದ್ರಿ Bharath Cinemas
ಹಾಗೂ ರಾಜ್ಯಾದ್ಯಂತ


Edited,Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ Digantha Mudrana Limited, Yeyyadi, Mangaluru 575008 email: karavalitharangini@gmail.com PH: +91 9880109212